ಕರ್ನಾಟಕ ಸರ್ಕಾರ

ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, ಸಂಪಿಗೆ ರಸ್ತೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು 560012

ಸಂಖ್ಯೆ:ಪಿಯು/ಸಿಬ್ಬಂದಿ/ಸಿಆರ್-02/007/ಎನ್ಓಸಿ/2018-19

ದಿನಾಂಕ: 24-09-2018

## ಜ್ಞಾಪನ

**ವಿಷಯ:**- ಕೇಂದ್ರ/ರಾಜ್ಯ ಸರ್ಕಾರ, ವಿಶ್ವವಿದ್ಯಾಲಯ ಹಾಗೂ ಇತರೆ ಹುದ್ದೆಗಳಿಗೆ ಮತ್ತು ಕೆ.ಸೆಟ್ ಪರೀಕ್ಷೆಗೆ ಅರ್ಜಿ ಸಲ್ಲಿಸಲು ಅನುಮತಿ ನೀಡುವ ಬಗ್ಗೆ.

**ಉಲ್ಲೇಖ:**- ಜಿಲ್ಲಾ ಉಪನಿರ್ದೇಶಕರು, ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರು ಹಾಗೂ ಸಿಬ್ಬಂದಿ ವರ್ಗದವರ ಪತ್ರಗಳು.

****

ಪದವಿ ಪೂರ್ವ ಶಿಕ್ಷಣ ಇಲಾಖೆಯ ಸರ್ಕಾರಿ ಪದವಿ ಪೂರ್ವ ಕಾಲೇಜು ,ಉಪನಿರ್ದೇಶಕರುಗಳ ಕಛೇರಿ ಹಾಗೂ ನಿರ್ದೇಶಕರ ಕಛೇರಿಯಲ್ಲಿ ಸೇವೆ ಸಲ್ಲಿಸುತ್ತಿರುವ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿಯವರು ರಾಜ್ಯ /ಕೇಂದ್ರ ಸರ್ಕಾರದ ಇತರೆ ಇಲಾಖೆಗಳಲ್ಲಿ ಖಾಲಿಯಿರುವ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಅನುಮತಿ ಕೋರಿ ಪ್ರಾಂಶುಪಾಲರು ಹಾಗೂ ಉಪನಿರ್ದೇಶಕರ ಮುಖೇನ ಮನವಿ ಪತ್ರಗಳನ್ನು ಸಲ್ಲಿಸಿರುತ್ತಾರೆ. ಸದರಿ ಪ್ರಸ್ತಾವನೆಗಳನ್ನು ಪರಿಶೀಲಿಸಿ, ಈ ಕೆಳಕಂಡ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ ವರ್ಗದವರ ಹೆಸರಿನ ಮುಂದೆ ತೋರಿಸಿರುವ ಪರೀಕ್ಷೆಗೆ ಅರ್ಜಿ ಸಲ್ಲಿಸಲು ಷರತ್ತಿಗೊಳಪಟ್ಟು ಅನುಮತಿ ನೀಡಿದೆ.

| ಕ್ರ ಸಂ | ಹೆಸರು ಮತ್ತು ಕಾಲೇಜು ವಿಳಾಸ ಶ್ರೀಮತಿ/ಶ್ರೀ/ಕುಮಾರಿ | ಅನುಮತಿ ಕೋರಲಾದ ಹುದ್ದೆ |
|---|---|---|
| 1. | ಶ್ರೀ ಮತಿ ಅಸ್ಮಾ ಡಿ.<br>ರಸಾಯನಶಾಸ್ತ್ರ ಉಪನ್ಯಾಸಕರು,<br>ಸರ್ಕಾರಿ ಪದವಿಪೂರ್ವ ಕಾಲೇಜು,<br>ಕೈವಾರ, ಚಿಕ್ಕಬಳ್ಳಾಪುರ ಜಿಲ್ಲೆ | ಕೇಂದ್ರೀಯ ವಿದ್ಯಾಲಯ ಸಂಘಟನೆ, ನವದೆಹಲಿ ಇಲ್ಲಿನ ಉಪಪ್ರಾಂಶುಪಾಲರ ಹುದ್ದೆಗೆ<br>ಅರ್ಜಿ ಸಲ್ಲಿಸಲು |
| 2. | ಶ್ರೀ ಚಂದ್ರಶೇಖರ ರೆಡ್ಡಿ ಜಿ ಎಂ,<br>ಇತಿಹಾಸ ಉಪನ್ಯಾಸಕರು,<br>ಸರ್ಕಾರಿ ಪದವಿ ಪೂರ್ವ ಕಾಲೇಜು,<br>ಕೈವಾರ , ಚಿಕ್ಕಬಳ್ಳಾಪುರ ಜಿಲ್ಲೆ | ಕೇಂದ್ರೀಯ ವಿದ್ಯಾಲಯ ಸಂಘಟನೆ, ನವದೆಹಲಿ ಇಲ್ಲಿನ ಉಪ ಪ್ರಾಂಶುಪಾಲರ ಹುದ್ದೆಗೆ<br>ಅರ್ಜಿ ಸಲ್ಲಿಸಲು |

**ಷರತ್ತುಗಳು:**

1. ಸದರಿ ಸಿಬ್ಬಂದಿಗಳು, ಪರೀಕ್ಷೆಗೆ ಸಂಬಂಧಿಸಿದಂತೆ ಅಧ್ಯಯನವನ್ನು ತಮ್ಮ ಸ್ವಂತ ಖರ್ಚಿನಲ್ಲಿ ಕೈಗೊಳ್ಳತಕ್ಕದ್ದು.
2. ಸಿಬ್ಬಂದಿಗಳು, ಸದರಿ ಪರೀಕ್ಷೆಯ ಅಧ್ಯಯನದ ನಿಮಿತ್ತ ಸರ್ಕಾರ/ಇಲಾಖೆಗೆ ಯಾವುದೇ ಆರ್ಥಿಕ ಹೊರೆ ಉಂಟಾಗತಕ್ಕದ್ದಲ್ಲ.
3. ಸದರಿ ಸಿಬ್ಬಂದಿಗಳು/ಉಪನ್ಯಾಸಕರುಗಳು, ವಿದ್ಯಾರ್ಥಿಗಳ ಪಾಠ-ಪ್ರವಚನಗಳಿಗೆ ತೊಂದರೆ ಉಂಟಾಗದಂತೆ ಬಿಡುವಿನ ವೇಳೆಯಲ್ಲಿ, ಪರೀಕ್ಷೆಯ ಅಧ್ಯಯನಕ್ಕೆ ಬೇಕಾದ ಸಿದ್ಧತೆ ಮಾಡಿಕೊಳ್ಳತಕ್ಕದ್ದು.
4. ಸದರಿ ಸಿಬ್ಬಂದಿ/ಉಪನ್ಯಾಸಕರುಗಳು ಸದರಿ ಪರೀಕ್ಷೆಯ ಅಧ್ಯಯನದ ನಿಮಿತ್ತ ವರ್ಗಾವಣೆ ಕೋರುವಂತಿಲ್ಲಅಥವಾ ಅವರ ಪರೀಕ್ಷೆಯ ಅಧ್ಯಯನ ಸರ್ಕಾರದ/ಇಲಾಖೆಯ ವರ್ಗಾವಣೆಗೆ ಅಡ್ಡಿ ಬರುವಂತಿಲ್ಲ.
5. ಸದರಿ ಸಿಬ್ಬಂದಿಗಳು /ಉಪನ್ಯಾಸಕರುಗಳು ಬೇರೆ ಯಾವುದೇ ಇಲಾಖೆಯ ಹುದ್ದೆಗೆ ಆಯ್ಕೆಯಾದಲ್ಲಿ, ಈಗ ಕಾರ್ಯ ನಿರ್ವಹಿಸುತ್ತಿರುವ ಹುದ್ದೆಯಿಂದ ಬಿಡುಗಡೆ ಹೊಂದುವ ಮೊದಲು ಇಲಾಖೆಯ ಅನುಮತಿ ಪಡೆಯತಕ್ಕದ್ದು.

24/9/18

ಜಂಟಿ ನಿರ್ದೇಶಕರು(ಆಡಳಿತ)
ಪದವಿ ಪೂರ್ವ ಶಿಕ್ಷಣ ಇಲಾಖೆ.

ಪ್ರತಿಗಳು:

1. ಸಂಬಂಧಪಟ್ಟ ಜಿಲ್ಲಾ ಉಪ ನಿರ್ದೇಶಕರಿಗೆ.
2. ಸಹಾಯಕ ನಿರ್ದೇಶಕರು, ಇ-ಆಡಳಿತ, ಪಪೂಶಿ ಇ, ಬೆಂಗಳೂರು.
3. ಸಂಬಂಧಿಸಿದ ಕಾಲೇಜಿನ ಪ್ರಾಂಶುಪಾಲರಿಗೆ ಹಾಗೂ ಕಛೇರಿ ಪ್ರತಿ.